# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು.**

ಸಂಖ್ಯೆ: ಸ.ಅ/ವಾ-21/ಪಿ.ಆರ್/10/2020-21 ದಿನಾಂಕ:25-02-2021.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:20-02-2021 ರಂದು 12.00 ಗಂಟೆಗೆ ವಾರ್ಡ್ ನಂ:21 ಹೆಬ್ಬಾಳ ವಾರ್ಡ್ ವ್ಯಾಪ್ತಿಯಲ್ಲಿನ ಕ್ಷೇಮಾಭಿವೃದ್ಧಿ ಸಂಘ (ರಿ) ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಎಂ.ವೆಂಕಟಾಚಲಪತಿ ಜಂಟಿ ಆಯುಕ್ತರು (ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ಮುಕೇಶ್ ಎಸ್ ಬಿರಾದಾರ್ (ಎ.ಇ) | ಸದಸ್ಯ ಕಾರ್ಯದರ್ಶಿ ವಾರ್ಡ್ ನಂ: 21 |
| 03 | ಮಂಜುನಾಥ್ (ಎ.ಇ.ಇ) | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) |
| 04 | ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾ-21 |
| 05 | ರಾಧ. ಈ | ಕಿರಿಯ ಅಭಿಯಂತರರು, ಬೆಸ್ಕಾಂ |
| 06 | ಲಯ್ಬುರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸದಸ್ಯರು |
| 07 | ರಾಮಣ್ಣ. ಎನ್ | ತೆರಿಗೆ ನೀರಿಕ್ಷಕರು ವಾರ್ಡ್-21 |
| 08 | ಎನ್. ಪ್ರಕಾಶ್ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ. |
| 09 | ಕ್ಯಾಪ್ಟನ್ ರಾಮಚಂದ್ರ | ಸ್ಥಳೀಯ ನಿವಾಸಿಗಳ |
| 10 | ವೀರಶೆಟ್ಟಿ | ಸ್ಥಳೀಯ ನಿವಾಸಿಗಳ |
| 11 | ಪ್ರಕಾಶ್ ಎಂ | ಸ್ಥಳೀಯ ನಿವಾಸಿಗಳ |
| 12 | ವಿಜಯ ಕುಮಾರ್ | ಸ್ಥಳೀಯ ನಿವಾಸಿಗಳ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ಎಂ.ವೆಂಕಟಾಚಲಪತಿ ಮತ್ತು ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದರ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:21 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಾರ್ವಜನಿಕರುಗಳ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ದಿನಾಂಕ : 20-02-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ತ್ಯಾಜ್ಯ ವಿಲೇವಾರಿ ಮಾಡಲು ಆಟೋ ಟಿಪ್ಪರ್ ವಾಹನವನ್ನು ಒದಗಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಹೆಬ್ಬಾಳ ವಿಭಾಗ ರವರಿಗೆ ಸೂಚಿಸಲಾಯಿತು.
2. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಛಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೆ ಒಬ್ಬರು ಮಾರ್ಷಲ್ ಅನ್ನು ನೇಮಿಸಿದ್ದು ಅವರಿಂದ ವಾರ್ಡ್ ನಲ್ಲಿ ಶೇಖರಣೆಗೊಳ್ಳುವ ಎಲ್ಲಾ ಪ್ರದೇಶಗಳಲ್ಲು ದಂಡ ವಿದಿಸಲು ಹಾಗೂ ತ್ಯಾಜ್ಯ ಶೇಖರಣೆಗೊಳ್ಳುವುದನ್ನು ತಡೆಯಲು ಸಾಧ್ಯವಾಗುತ್ತಿಲ್ಲ ಅದ್ದರಿಂದ ವಾರ್ಡ್ ವ್ಯಾಪ್ತಿಗೆ

ಹೆಚ್ಚುವರಿಯಾಗಿ ಒಬ್ಬ ಮಾರ್ಷಲ್ ಅನ್ನು ನೇಮಿಸಲು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಹೆಬ್ಬಾಳ ವಿಭಾಗ ರವರಿಗೆ ಸೂಚಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿ ಕಸ ಶೇಖರಣೆಗೊಳ್ಳುವ ಸ್ಥಳಗಳಲ್ಲಿ ಕಸದ ಜಾಗೃತಿ ಮತ್ತು ದಂಡ ವಿದಿಸಲಾಗುವುದೆಂಬ ನಾಮ ಫಲಕವನ್ನು ಅಳವಡಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರು ರವರುಗಳಿಗೆ ಸೂಕ್ತ ಕ್ರಮ ವಹಿಸಲು ಸೂಚಿಸಿದೆ.

- **ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ:**
  1. ವಾರ್ಡ್ ವ್ಯಾಪ್ತಿಯ ಆನಂದ ನಗರ ಪ್ರದೇಶದಲ್ಲಿ ವಾಸವಿರುವ ಸಾರ್ವಜನಿಕರುಗಳಿಗೆ ತೊಂದರೇಯಾಗದಂತೆ ಸಮಯಕ್ಕೆ ಸರಿಯಾಗಿ ಕುಡಿಯುವ ನೀರನ್ನು ಒದಗಿಸಲು ಸೂಚಿಸಿದೆ.

- **ಕಾಮಗಾರಿ ಇಲಾಖೆಗೆ.**
  1. ವಾರ್ಡ್ ವ್ಯಾಪ್ತಿಯಲ್ಲಿನ ಪಾದಚಾರಿ ಮಾರ್ಗದಲ್ಲಿರುವ ಸಾರ್ವಜನಿಕರುಗಳು ಕುಳಿತು ಕೊಳ್ಳುವ ಕುರ್ಚಿಗಳನ್ನು ಅಗತ್ಯ ಸ್ಥಳಕ್ಕೆ ಪರಿಶೀಲಿಸಿ ವರ್ಗಾಯಿಸುವ ಬಗ್ಗೆ.

- **ವಿದ್ಯುತ್ ವಿಭಾಗ.**
  1. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ದುರಸ್ಥಿಯಲ್ಲಿರುವುದನ್ನು ಈ ಕೂಡಲೇ ಸರಿಪಡಿಸುವಂತೆ ಸೂಚಿಸಲಾಯಿತು.

- **ಆರೋಗ್ಯ ಇಲಾಖೆಗೆ.**
  1. ವಾರ್ಡ್ ವ್ಯಾಪ್ತಿಯಲ್ಲಿ ವಾಸವಿರುವ ಸಾರ್ವಜನಿಕರುಗಳಿಗೆ ಅಗತ್ಯವಿದ್ದಲ್ಲಿ ವ್ಯಾಕ್ಸೀನ್ ಒದಗಿಸುವಂತೆ ಸಂಬಂಧಪಟ್ಟ ಆರೋಗ್ಯ ಅಧಿಕಾರಿಗಳು ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಸೂಚಿಸಲಾಯಿತು ಮತ್ತು ಅದಕ್ಕೆ ಸಂಬಂಧಿಸಿದ ವಿವರಗಳನ್ನು ಸಲ್ಲಿಸಲು ಕೋರಿದೆ.
  2. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೋವಿಡ್-19 ಸಾಂಕ್ರಮಿಕ ರೋಗವು ಅಲ್ಲಲ್ಲಿ ಕಾಣಿಸಿಕೊಳ್ಳುತ್ತಿರುವುದರಿಂದ ಸದರಿ ಸ್ಥಳಗಳಲ್ಲಿ ಔಷಧಿಯನ್ನು ಸಿಂಪಡಿಸುವಂತೆ ಸೂಚಿಸಿದೆ.
  3. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಮುಂಜಾಗ್ರುತ ಕ್ರಮವಾಗಿ ಆಟೋ ಅನೋನ್ಸ್‌ಮೆಂಟ್ ಮಾಡಲು ಸೂಚಿಸಿದೆ.

- **ವಾರ್ಡ್ ಕಮಿಟಿ ಸಭೆಯಲ್ಲಿ ವಾರ್ಡ್‌ಗೆ ಅಗತ್ಯವಿರುವ ಕುರಿತು ಬಜೆಟ್ ಚರ್ಚೆ ನಡೆಸಲಾಯಿತು.**
  1. ಆನಂದನಗರ ಕಲಾ ಭವನ ಸಭಾಂಗಣದ ಬಗ್ಗೆ ಚರ್ಚಿಸಿ ಸಭಾಂಗಣದ ವಿಸ್ತರಣೆ ಮತ್ತು ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ.
  2. ವಾರ್ಡ್ ವ್ಯಾಪ್ತಿಯಲ್ಲಿ ಮಕ್ಕಳ ಪಾರ್ಕ್ ಅಭಿವೃದ್ಧಿ ಪಡಿಸುವ ಬಗ್ಗೆ.
  3. ಪಾದ ಮಾರ್ಗ ನಿರ್ಮಿಸುವ ಬಗ್ಗೆ.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

ಪ್ರತಿಯನ್ನು:-

1. **ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.**
2. **ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**
3. **ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**
4. **ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.**
5. **ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.**
6. **ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.**
7. **ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.**
8. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.**
9. **ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.**
10. [illegible]